## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ. ಜೆ. ಡಿ. ನಾಯಕ್, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ, ಮತ್ತು ಶ್ರೀ. ಆರ್. ಓಂಕಾರಪ್ಪ, ಸಹಾಯಕ ಕೃಷಿ ಅಧಿಕಾರಿ, ಸಾಗರ, ಇವರುಗಳ ವಿರುದ್ಧ ಲೋಕಾಯುಕ್ತ ವಿಚಾರಣೆ ನಡೆಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:-**

ಸಹಾಯಕ ನಿಭಂಡಕರು ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂ. Compt/Uplok/BD/440/2010/ARLO-1, ದಿನಾಂಕ:29-09-2014.

**ಪ್ರಸ್ತಾವನೆ:-**

ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಯಲ್ಲಿ ಕಾಲುಸಂಕ ನಿರ್ಮಾಣ ಯೋಜನೆಯಲ್ಲಿ ಕೈಗೊಂಡ ಕಾಮಗಾರಿಗಳು ಕಳಪೆಯಾಗಿವೆಯೆಂದು ಶ್ರೀ.ರವಿ ಖುಗ್ವೆ ಬಿನ್ ರಾಮಪ್ಪ, ಜಿಲ್ಲಾ ಪಂಚಾಯತ್ ಸದಸ್ಯರು, ಅಗ್ರಹಾರ, ಗಾಂಧಿನಗರ, ಸಾಗರ, ಇವರು ಶ್ರೀ.ಅನೂಪ್, ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ, ಶಿವಮೊಗ್ಗ ಮತ್ತು ಶ್ರೀ.ಜೆ.ಡಿ.ನಾಯಕ್, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ, ಸಾಗರ, ಇವರ ವಿರುದ್ಧ ಮಾನ್ಯ ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಈ ದೂರಿನ ಬಗ್ಗೆ ಮಾನ್ಯ ಲೋಕಾಯುಕ್ತರಿಂದ ತನಿಖೆ ನಡೆಸಿದಾಗ ಶ್ರೀ.ಜೆ.ಡಿ.ನಾಯಕ್, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ, ಸಾಗರ, ಮತ್ತು ಶ್ರೀ.ಆರ್. ಓಂಕಾರಪ್ಪ, ಸಹಾಯಕ ಕೃಷಿ ಅಧಿಕಾರಿ, ಸಾಗರ, ಇವರುಗಳು ಸರ್ಕಾರಕ್ಕೆ ರೂ.23,706/-ಗಳು ನಷ್ಟವಾಗಲು ಕಾರಣರಾಗಿರುತ್ತಾರೆಂಬುದು ಕಂಡುಬಂದಿರುತ್ತದೆ. ಈ ಮೂಲಕ ಆಪಾದಿತರುಗಳು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದರ ಮೂಲಕ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳನ್ನು ಉಲ್ಲಂಘಿಸಿರುವುದರಿಂದ ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಅನುವಾಗುವಂತೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರಿಕ ಸೇವಾ (ಸಿಸಿಎ) ನಿಯಮಾವಳಿಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ತಮ್ಮ ಪ್ರಾಧಿಕಾರಕ್ಕೆ ವಹಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿ ಮಾನ್ಯ ಉಪ ಲೋಕಾಯುಕ್ತ-2 ರವರು ಸಲ್ಲಿಸಿದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಪತ್ರದೊಂದಿಗೆ ಮಾನ್ಯ ಉಪ ಲೋಕಾಯುಕ್ತರ ವರದಿ ಹಾಗೂ ಅಡಕಗಳನ್ನು ಸಹಾಯಕ ನಿಬಂಧಕರು ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಸರ್ಕಾರಕ್ಕೆ ಕಳುಹಿಸುತ್ತಾ ಮಾನ್ಯ ಲೋಕಾಯುಕ್ತರ ವರದಿಯನ್ವಯ ಕ್ರಮ ಜರುಗಿಸಿದ ಬಗ್ಗೆ ವರದಿಯನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(4)ರನ್ವಯ ವರದಿ ಮಾಡುವಂತೆ ಕೋರಿರುತ್ತಾರೆ. ಮಾನ್ಯ ಉಪ ಲೋಕಾಯುಕ್ತರು-2 ರವರ ವರದಿಯನ್ನು ಪರಿಶೀಲಿಸಿದಾಗ, ಶ್ರೀ. ಜೆ.ಡಿ.ನಾಯಕ್, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ,

ಮತ್ತು ಶ್ರೀ.ಆರ್. ಓಂಕಾರಪ್ಪ, ಸಹಾಯಕ ಕೃಷಿ ಅಧಿಕಾರಿ, ಸಾಗರ, ಇವರು ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಪ್ರಕಾರ ದುರ್ನಡತೆ ಎಸಗಿರುವುದು ಮೇಲು ನೋಟಕ್ಕೆ (prima-facie) ಕಂಡು ಬಂದಿದ್ದರಿಂದ, ಅವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14–ಎ ರನ್ವಯ ಮಾನ್ಯ ಉಪ ಲೋಕಾಯುಕ್ತ–2 **ರವರಿಗೆ** ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 78 ಕೃಪವಿ 2014. ಬೆಂಗಳೂರು, ದಿನಾಂಕ:17–12–2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ.ಜೆ.ಡಿ.ನಾಯಕ್, ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿ, ಸಾಗರ, ಶಿವಮೊಗ್ಗ ಜಿಲ್ಲೆ ಮತ್ತು ಶ್ರೀ.ಆರ್. ಓಂಕಾರಪ್ಪ, ಸಹಾಯಕ ಕೃಷಿ ಅಧಿಕಾರಿ, ಸಾಗರ, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14–ಎರನ್ವಯ ಸದರಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ–2 ಇವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.
(ಸೇವೆಗಳು ಮತ್ತು ಸಮನ್ವಯ)

ಇವರಿಗೆ:–

1. ಪ್ರಧಾನ ಮಹಾಲೇಖಪಾಲರ ಕಛೇರಿ, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು–1.
2. ನಿಭಂದಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸಹಾಯಕ ನಿಭಂದಕರು, ಕಾನೂನು ಅಭಿಪ್ರಾಯ–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಸಂಬಂಧಪಟ್ಟ ಅಧಿಕಾರಿಯವರಿಗೆ (ಕೃಷಿ ಆಯುಕ್ತರ ಮೂಲಕ)
7. ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.